# ಯುಗಾದಿ

ಚೈತ್ರ ಮಾಸದ ಶುಕ್ಲ ಪಕ್ಷದ ಪಾಡ್ಯದಂದು ಯುಗಾದಿ ಹಬ್ಬ ಬರುತ್ತದೆ. ಇದು ಚಾಂದ್ರಮಾನದ ಸಂವತ್ಸ ಆರಂಭದ ದಿನ. ಈ ದಿನಕ್ಕೆ ಆರೋಗ್ಯ ಪ್ರತಿಪತ್ ಎಂದು ಹೇಳುತ್ತಾರೆ. ವರ್ಷದ ಶುಭ ದಿನವಾದ 'ಯುಗಾದಿ' ಮಂಗಳ ಕಾರ್ಯವನ್ನು ಮಾಡಲು ಯೋಗ್ಯ ದಿನವೆಂದು ಹೇಳುವರು. ಏಕೆಂದರೆ ಇದು ಅತಿ ಶ್ರೇಷ್ಠವಾದ ಮೂರುವರೆ ಮುಹೂರ್ತಗಳಲ್ಲಿ ಒಂದು ದಿನ ಎಂದು ಭಾರತಿಯರು ನಂಬುತ್ತಾರೆ. ರೈತರು, ವ್ಯಾಪಾರಿಗಳು ಹಾಗೂ ಇನ್ನಿತರರು ಕೂಡ ಅಂದಿನ ದಿನವೇ ಶುಭ ಕಾರ್ಯವನ್ನು ಮಾಡುತ್ತಾರೆ. 'ಯುಗಾದಿ' ಬಂದಿತೆಂದರೆ ಎಲ್ಲಡೆಯಲ್ಲಿ ಸಂತೋಷ, ಸಂಭ್ರಮ ತುಂಬಿ ತುಳುಕುತ್ತಿರುತ್ತದೆ.

ಇದು ಬ್ರಹ್ಮದೇವನ ಸೃಷ್ಟಿಯ ದಿನ. ಈ ದಿನವೇ ಅಯೋಧ್ಯೆಯಲ್ಲಿ ಶ್ರೀರಾಮಚಂದ್ರನ ಪಟ್ಟಾಭಿಷೇಕವಾದ ದಿನ, ಶಾಲಿವಾಹನ ಶಕೆ ಪ್ರಾರಂಭವಾದ ದಿನ, ಪೌರಾಣಿಕ ವಿಶೇಷತೆಗಳ ದಿನವಾಗಿದೆ. ಅಲ್ಲದೆ ಮಹಾಭಾರತದಲ್ಲಿ ಬರುವ ಚೇದಿರಾಜ್ಯದ ಅರಸು ವಸುವಿನ ಉಗ್ರ ತಪಸ್ಸಿಗೆ ಮೆಚ್ಚಿದ ಇಂದ್ರನು ವೈಜಯಂತಿ ಮಾಲೆಯನ್ನು ಅವನಿಗೆ ಕೊಟ್ಟು, ಚಿನ್ನದ ಕಲಶವುಳ್ಳ ಚಕ್ರಾಧಿಪತ್ಯದ ಧ್ವಜವನ್ನು ರಾಜನ ತಲೆಯ ಮೇಲೆ ಇಟ್ಟಿರುವ ದಿನವಾಗಿದೆ.

'ಯುಗಾದಿ' ಎಂಬ ಶಬ್ದವು ಸಂಸ್ಕೃತದ 'ಯುಗ' ಮತ್ತು 'ಆದಿ' ಎಂಬ ಎರಡು ಶಬ್ದಗಳಿಂದ ಕೂಡಿದೆ. ಸೃಷ್ಟಿ ನಾಟಕದಲ್ಲಿ ನಾಲ್ಕು ಯುಗಗಳು ಇವೆ. ಸತ್ಯಯುಗ, ತ್ರೇತಾಯುಗ, ದ್ವಾಪರಯುಗ, ಮತ್ತು ಕಲಿಯುಗ. 'ಆದಿ' ಎಂದರೆ ಪ್ರಾರಂಭ, ಪೂರ್ವಕಾಲ ಎಂದಾಗುತ್ತದೆ.

ವರ್ತಮಾನ ಸಮಯ ಕಲಿಯುಗದ ಕೊನೆಯ ಹಾಗೂ ಸತ್ಯಯುಗದ ಸಂಗಮಸಮಯ, ಸಂಗಮಯುಗವಾಗಿದೆ. ಹೀಗೆ ಕಲಿಯುಗದ ಅಂಧಕಾರದ ರಾತ್ರಿಯನ್ನು ಸತ್ಯಯುಗದ ಜ್ಞಾನದ ಬೆಳಕನ್ನಾಗಿ ಪರಿವರ್ತಿಸುವ ಉದಯ ಕಾಲವೇ 'ಯುಗಾದಿ'. ಈ ಯುಗಾದಿಯ ಸಮಯದಲ್ಲಿ ನಿರಾಕಾರ ಶಿವನು ಪ್ರಜಾಪಿತ ಬ್ರಹ್ಮಾರವರ ಶರೀರದಲ್ಲಿ ಪ್ರವೇಶ ಮಾಡಿ, ಹೊಸ ಸೃಷ್ಟಿಯ ಸ್ಥಾಪನೆ ಮಾಡುವನು. ಕಲಿಯುಗದ ತಮೋಪ್ರಧಾನ ಮನುಷ್ಯಾತ್ಮರಿಗೆ ಸತ್ಯ ಜ್ಞಾನವನ್ನು ನೀಡಿ, ಅವರಿಗೆ ಸಹಜ ರಾಜಯೋಗವನ್ನು ಕಲಿಸಿ, ಅವರನ್ನು ಸ್ವರ್ಗ ಅಥವಾ ರಾಮರಾಜ್ಯಕ್ಕಾಗಿ ಬೇಕಾಗುವ ಶ್ರೀ ಲಕ್ಷ್ಮೀ-ನಾರಾಯಣ, ಶ್ರೀರಾಮ-ಸೀತೆಯರ ಸಮಾನ ದೇವಾತ್ಮರನ್ನಾಗಿ ಮಾಡುತ್ತಾನೆ. ಅದಕ್ಕಾಗಿಯೇ ರಾಮಾಯಣದಲ್ಲಿ ಇಂದ್ರನು ವೈಜಯಂತಿ ಮಾಲೆಯನ್ನು ಹಾಗೂ ಚಿನ್ನದ ಕಲಶವನ್ನು ವಸುವಿಗೆ ನೀಡಿದ ದಿನವೆಂದು ಹೇಳಲಾಗುತ್ತದೆ.

ನಿಜವಾಗಿ ಸತ್ಯ 'ಯುಗಾದಿ', ಸಂಗಮ ಯುಗ. ಈ ಯುಗ ಬರುವುದು ಕಲ್ಪಕ್ಕೊಮ್ಮೆ ಮಾತ್ರ. ಅನೇಕ ಕಾಲಚಕ್ರಗಳು ಅನಾದಿ ಕಾಲದಿಂದ ನಡೆಯುತ್ತಾ ಬಂದಿದೆ. ಉದಾಹರಣೆಗೆ 60 ಸೆಕೆಂಡಿಗೆ 1 ನಿಮಿಷ, 60 ನಿಮಿಷಕ್ಕೆ 1 ಗಂಟೆ, 24 ಗಂಟೆಗೆ 1 ದಿನ, 7 ದಿನಗಳಿಗೆ 1 ವಾರ, 30 ದಿನಗಳಿಗೆ 1 ತಿಂಗಳ, 12 ತಿಂಗಳಿಗೆ 1 ವರ್ಷದಂತೆ, ಈ ಸೃಷ್ಟಿ ನಾಟಕವು 5000 ವರ್ಷದ್ದಾಗಿದೆ. ಈಶ್ವರೀಯ ಜ್ಞಾನದ ಪ್ರಕಾರ ಸತ್ಯಯುಗ 1250 ವರ್ಷ, ತ್ರೇತಾಯುಗ 1250 ವರ್ಷ, ದ್ವಾಪರಯುಗ 1250 ವರ್ಷ, ಕಲಿಯುಗ 1250 ವರ್ಷ. ಈ ರೀತಿ ನಾಲ್ಕು ಯುಗಗಳನ್ನು ಸೇರಿ ಒಂದು ಕಲ್ಪ ಆಗುತ್ತದೆ. ಈ ಕಾಲಚಕ್ರ 5000 ವರ್ಷಕ್ಕೊಮ್ಮೆ ಪುನರಾವೃತ್ತಿಯಾಗುತ್ತದೆ. ಪರಮಪಿತ ಶಿವನು ಸಂಗಮಯುಗದಲ್ಲಿ, [ಕಲಿಯುಗದ ಅಂತ್ಯ ಹಾಗೂ ಸತ್ಯಯುಗದ ಆರಂಭದ ಸಮಯ] ಒಮ್ಮೆ ಮಾತ್ರ ಈ ಭೂಮಿಗೆ ಬಂದು ವಿಶ್ವಪರಿವರ್ತನೆ ಮಾಡುತ್ತಾರೆ. ಅದರ ಸ್ಮಾರಕವಾಗಿಯೇ 'ಯುಗಾದಿ'ಯನ್ನು ವರುಷ-ವರುಷ ಆಚರಿಸುತ್ತಾರೆ.

ಇಂದಿನ ದಿನ ಬೇವು ಮಿಶ್ರಿತ ನೀರಿನಿಂದ ಸ್ನಾನ ಮಾಡಿ, ಬೇವು ಬೆಲ್ಲವನ್ನು ಸೇವನೆ ಮಾಡುತ್ತಾರೆ. ನಾವು ಬೇವಿನ ಸಮಾನವಾದ ದು:ಖ, ಅಶಾಂತಿಯ, ಪ್ರಪಂಚದಲ್ಲಿದ್ದರೂ ಬೆಲ್ಲದ ಸಮಾನವಾದ ಶಾಂತಿ, ಅತೀಂದ್ರಿಯ ಸುಖ, ಆತ್ಮೀಯತೆ, ಸ್ನೇಹ, ಮಧುರತೆಯ ಅನುಭವ ಪರಮಪಿತ ಶಿವನ ಸತ್ಯ ಜ್ಞಾನ ಮತ್ತು ಯೋಗದಿಂದ ಮಾಡುವುದು ಎಂಬ ನಿಜ ಅರ್ಥವಾಗಿದೆ.

ಈ ರೀತಿಯಾಗಿ ಯುಗಾದಿಯು ನಾಡಿಗೆ ಮಾತ್ರವಲ್ಲದೆ, ಇಡೀ ವಿಶ್ವಕ್ಕೇ ಉಜ್ವಲತೆಯನ್ನು, ಜನತೆಗೆ ಸುಖ ಶಾಂತಿಯನ್ನು ನೀಡುವ ವಜ್ರಸಮಾನ ಸಮಯ. ಹೀಗೆ ಯುಗಾದಿಯು 'ಭಕ್ತರಿಗಾಗಿ, ವಿಶಾಲ ಹೃದಯದ ಶಿವ ಶರಣೆಯರಿಗಾಗಿ, ಮುಕ್ತಿ ಬಯಸುವ ಆರಾಧಕರಿಗಾಗಿ, ಶಿವನು ಭಕ್ತರ ಕರೆಗೆ ಓಗೊಟ್ಟು, ಅವರ ಭಕ್ತಿಯ ಫಲವನ್ನು ನೀಡಲು ಧರೆಗೆ ಬಂದಿದ್ದಾನೆ' ಎಂಬ ಪರಮ ಸಂದೇಶವನ್ನು ನೀಡುವ ಮಹಾನ ಪರ್ವವಾಗಿದೆ.

*--ವಿಶ್ವಾಸ ಸೋಹೋನಿ.*